## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023, ದಿನಾಂಕ: 20-05-2023
2. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023, ದಿನಾಂಕ: 06-06-2023.
3. ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-4), ದಿನಾಂಕ: 12-06-2023.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕಕಡತ ಸಂಖ್ಯೆ: CD/SS/TRG/8/2023-SS.

**********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಕರ್ನಾಟಕ ರಾಜ್ಯದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ 'ಗೃಹಲಕ್ಷ್ಮಿ ಯೋಜನೆ'ಯನ್ನು ಜಾರಿಗೆ ತರಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ ಹಾಗೂ ಈ ಯೋಜನೆಯ ವಿವರವಾದ ರೂಪುರೇಷೆ ಹಾಗೂ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದೆಂದು ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯನ್ನು 2023-24ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯ ಅರ್ಜಿಗಳನ್ನು ಪರಿಶೀಲಿಸಿ ಮಂಜೂರಾತಿ ನೀಡಲು ಸಂಬಂಧಿಸಿದ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಮಂಜೂರಾತಿ ಪ್ರಾಧಿಕಾರವೆಂದು ಪರಿಗಣಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕಕಡತದಲ್ಲಿ, ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000/-ಗಳನ್ನು ನೀಡುವ ಗೃಹಲಕ್ಷ್ಮಿ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಮಾರ್ಗಸೂಚಿಯನ್ನು ತಯಾರಿಸಿ ಈ ಸಂಬಂಧ ಆದೇಶ ಹೊರಡಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-15),**
**ಬೆಂಗಳೂರು, ದಿನಾಂಕ: 17-07-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಕುಟುಂಬದಲ್ಲಿನ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000/-ಗಳನ್ನು ನೀಡುವ "ಗೃಹಲಕ್ಷ್ಮಿ" ಯೋಜನೆಯನ್ನು ಈ ಆದೇಶಕ್ಕೆ ಲಗತ್ತಿಸಿರುವ ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

N.S. Khatavkar
17/07/2023

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

**ಇವರಿಗೆ:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
6. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
7. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು (ಪ್ರಕರಣ ಸಂಖ್ಯೆ-C-381/2023).
8. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮುಖಾಂತರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನಸೌಧ, ಬೆಂಗಳೂರು.
10. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾ-15), ದಿನಾಂಕ: 17-07-2023ಕ್ಕೆ ಅನುಬಂಧ**

**<u>ಗೃಹಲಕ್ಷ್ಮಿ ಯೋಜನೆಯ ಮಾರ್ಗಸೂಚಿಗಳು</u>**

- **ಗೃಹಲಕ್ಷ್ಮಿ ಯೋಜನೆಯ ಉದ್ದೇಶ:**

ರಾಜ್ಯದ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ. ಕುಟುಂಬದ ನಿರ್ವಹಣೆಯಲ್ಲಿ ಕುಟುಂಬದ ಯಜಮಾನಿಯ ಪಾತ್ರ ಪ್ರಮುಖವಾಗಿದ್ದು, ಯಜಮಾನಿಯು ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ ಕುಟುಂಬದ ನಿರ್ವಹಣೆಯು ಉತ್ತಮ ಗುಣಮಟ್ಟದಲ್ಲಿರುತ್ತದೆ. ಆದ್ದರಿಂದ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ.2000-00ಗಳನ್ನು ನೀಡುವ ಗೃಹಲಕ್ಷ್ಮಿ ಯೋಜನೆಯನ್ನು 2023-24ನೇ ಸಾಲಿನಿಂದ ಜಾರಿಗೆ ತರಲಾಗಿದೆ.

- **ಯೋಜನೆಯ ವ್ಯಾಪ್ತಿ**:

ಗೃಹಲಕ್ಷ್ಮಿ ಯೋಜನೆಯು ಕರ್ನಾಟಕ ರಾಜ್ಯದ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಿಂದ ವಿತರಿಸಿರುವ ಪಡಿತರ ಚೀಟಿಯಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಗೆ ಮಾತ್ರ ಅನ್ವಯವಾಗುತ್ತದೆ.

- **ಯೋಜನೆಯ ಸೌಲಭ್ಯ ಪಡೆಯಲು ಪ್ರಮುಖ ಅರ್ಹತೆಗಳು:**

1. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ.
2. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಈ ಯೋಜನೆಗೆ ಅರ್ಹರಾಗುವುದಿಲ್ಲ.
3. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದಲ್ಲಿ ಅರ್ಹರಾಗುವುದಿಲ್ಲ.

- **ಯೋಜನೆಯಡಿ ನೋಂದಾಯಿಸಲು ಬೇಕಾದ ದಾಖಲಾತಿಗಳು**:

1. ಪಡಿತರ ಚೀಟಿಯ ಸಂಖ್ಯೆ,
2. ಯಜಮಾನಿಯ ಹಾಗೂ ಯಜಮಾನಿ ಪತಿಯ ಆಧಾರ್ ಕಾರ್ಡ್ ಸಂಖ್ಯೆ.
3. ಯಜಮಾನಿಯ ಆಧಾರ್‌ಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಯ ಪಾಸ್ ಬುಕ್/ ಫಲಾನುಭವಿಯು ಇಚ್ಛಿಸುವ ಪರ್ಯಾಯ ಬ್ಯಾಂಕ್ ಖಾತೆಯ ವಿವರ.

- **ನೋಂದಣಿ ವಿಧಾನ**:

1. ಫಲಾನುಭವಿಗಳು ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಬಾಪೂಜಿ ಸೇವಾ ಕೇಂದ್ರ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ ಉಚಿತವಾಗಿ ನೋಂದಾಯಿಸಿ ಕೊಳ್ಳಬಹುದು.

2. ಫಲಾನುಭವಿಗಳು ಮೇಲ್ಕಾಣಿಸಿದ ಕೇಂದ್ರಗಳಲ್ಲದೆ "ಪ್ರಜಾ ಪ್ರತಿನಿಧಿ" (citizen volunteers) ಮೂಲಕ ಸಹ ಸೇವಾಸಿಂಧು ಪೋರ್ಟಲ್‌ನಲ್ಲಿ ಉಚಿತವಾಗಿ ನೋಂದಾಯಿಸಿಕೊಳ್ಳಬಹುದು.
3. ಪ್ರತಿ ಫಲಾನುಭವಿಯ ನೋಂದಾವಣೆಗೆ ನಿಗದಿ ಮಾಡಿರುವ ದಿನಾಂಕ, ಸಮಯ ಮತ್ತು ಸ್ಥಳವನ್ನು 1902ಕ್ಕೆ ಕಾಲ್ ಮಾಡಿ ಅಥವಾ 8147500500 ನಂಬರ್‌ಗೆ SMS ಮೂಲಕ ಸಂದೇಶ ಕಳುಹಿಸಿ ಮಾಹಿತಿ ಪಡೆಯಬಹುದಾಗಿದೆ.
4. ನಿಗಧಿತ ಸಮಯಕ್ಕೆ ಭೇಟಿ ನೀಡಿ ನೋಂದಾವಣೆ ಮಾಡಿಕೊಳ್ಳಲು ಸಾಧ್ಯವಾಗದೆಯಿದ್ದಲ್ಲಿ, ಅದೇ ಕೇಂದ್ರಕ್ಕೆ ಮುಂದಿನ ಯಾವುದೇ ದಿನಗಳಲ್ಲಿ ಕಛೇರಿ ಸಮಯದ ನಂತರ (ಸಂಜೆ 5.00 ಗಂಟೆ ನಂತರ) ತೆರಳಿ ನೋಂದಾಯಿಸಿಕೊಳ್ಳಬಹುದು.
5. ಅನುಮೋದಿಸಲ್ಪಟ್ಟ ಅರ್ಹ ಫಲಾನುಭವಿಗಳಿಗೆ ಮಂಜೂರಾತಿ ಪತ್ರವನ್ನು ನೀಡಲಾಗುವುದು.
6. ಯೋಜನೆಯಡಿ ನೋಂದಾಯಿಸುವ ಫಲಾನುಭವಿಯು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ.
7. ಯೋಜನೆಯಡಿ ನೋಂದಾಯಿಸಿಕೊಳ್ಳಲು ಯಾವುದೇ ಅಂತಿಮ ದಿನಾಂಕ ಮತ್ತು ಸಮಯ ನಿಗದಿ ಪಡಿಸಿರುವುದಿಲ್ಲ.

- **ನೋಂದಣಿ ವಿಧಾನದ ಪ್ರಕ್ರಿಯೆ (FLOW Chart)**

ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ಫಲಾನುಭವಿಗಳ ನೋಂದಣಿ ಪ್ರಕ್ರಿಯೆ 3 ಪ್ರಕಾರ ಗಳಲ್ಲಿ ಇರುತ್ತದೆ.

**ವಿಧಾನ-1 (Pre-Sanctioned RC's)**: ಈಗಾಗಲೇ ಕುಟುಂಬ ತಂತ್ರಾಂಶದಿಂದ ಅರ್ಹ ಫಲಾನುಭವಿಯ ಪಡಿತರ ಚೀಟಿಯ ಸಂಖ್ಯೆಯನ್ನಾಧರಿಸಿ ಯೋಜನೆಯಡಿ ಫಲಾನುಭವಿಗಳೆಂದು ಗುರುತಿಸಲಾಗಿದೆ. ಮುಂದುವರೆದು ಯೋಜನೆಯ Online ರಿಜಿಸ್ಟ್ರೇಷನ್‌ನ ಕೆಲವು ಫೀಲ್ಡ್‌ಗಳನ್ನು ಭರ್ತಿ ಮಾಡುವ ಅವಶ್ಯಕತೆ ಇದ್ದು, ಮೇಲ್ಕಾಣಿಸಿದ ಕೇಂದ್ರಗಳಿಗೆ ಭೇಟಿ ನೀಡಿ ಅಗತ್ಯ ಮಾಹಿತಿ ಒದಗಿಸುವುದು.
**(Flow Chart-** ಅನುಬಂಧ-1ರಲ್ಲಿ ಲಗತ್ತಿಸಿದೆ)

**ವಿಧಾನ-2 (Process for Open Portal):** ಫಲಾನುಭವಿಯ ಪಡಿತರ ಚೀಟಿಯ ಸಂಖ್ಯೆಯನ್ನು upload ಮಾಡಬೇಕಾಗುತ್ತದೆ. ಇದರ ಅನುಸಾರ ಕುಟುಂಬ ತಂತ್ರಾಂಶದಿಂದ ಫಲಾನುಭವಿಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ. ಸದರಿ ಮಾಹಿತಿಯನ್ನು ಪರಿಶೀಲಿಸಿ ದಾಖಲೆಗಳು ತಾಳೆಯಾಗಿರುವುದು ಕಂಡುಬಂದಲ್ಲಿ ಯೋಜನೆಯಡಿ ನೋಂದಣಿ ಮಾಡಲಾಗುತ್ತದೆ.
**(Flow Chart-** ಅನುಬಂಧ-2ರಲ್ಲಿ ಲಗತ್ತಿಸಿದೆ)

**ವಿಧಾನ-3 (Process for Citizen Enrollers)**: ಪ್ರಜಾಪ್ರತಿನಿಧಿಗಳು ಮನೆಮನೆಗೆ ತೆರಳಿ ಇದುವರೆಗೂ ಯೋಜನೆಯಡಿ ನೋಂದಾಯಿಸದ ಫಲಾನುಭವಿಗಳ ನೋಂದಣಿ ಮಾಡಿಕೊಳ್ಳುತ್ತಾರೆ. ಯೋಜನೆಯಡಿ ನೋಂದಾಯಿಸಲು ಅವಶ್ಯವಿರುವ ದಾಖಲೆಗಳ ಮಾಹಿತಿ ನೀಡಿ ಪ್ರಜಾ ಪ್ರತಿನಿಧಿಗಳ ಮೂಲಕ ನೋಂದಾಯಿಸಿಕೊಳ್ಳಬಹುದು.
**(Flow Chart-** ಅನುಬಂಧ-3ರಲ್ಲಿ ಲಗತ್ತಿಸಿದೆ)

- **ಫಲಾನುಭವಿಗಳಿಗೆ ಹಣಪಾವತಿ ವಿಧಾನ** :

1. ಈಗಾಗಲೇ ಆಧಾರ್ ಜೋಡಣೆಯಾಗಿರುವ ಫಲಾನುಭವಿಯ ಖಾತೆಗೆ ಮಾಹೆಯಾನ ರೂ.2000/- ಗಳನ್ನು ನೇರ ವರ್ಗಾವಣೆ ಮೂಲಕ(DBT) ಜಮೆ ಮಾಡಲಾಗುವುದು.
2. ಒಂದು ವೇಳೆ ಫಲಾನುಭವಿಗಳು ಇಚ್ಛಿಸಿದಲ್ಲಿ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆ ಬದಲು ಕುಟುಂಬದ ಯಜಮಾನಿಯ ಹೆಸರಿನಲ್ಲಿರುವ ಪರ್ಯಾಯ ಬ್ಯಾಂಕ್ ಖಾತೆಯನ್ನು ನೀಡಬಹುದಾಗಿರುತ್ತದೆ. ಸದರಿ ಬ್ಯಾಂಕ್ ಖಾತೆಗೆ ಮಾಹೆಯಾನ ರೂ. 2000/-ಗಳನ್ನು ಆರ್.ಟಿ.ಜಿ.ಎಸ್. ಮೂಲಕ ಜಮೆ ಮಾಡಲಾಗುವುದು.
3. ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆ ಬದಲು Non Aadhar Seeded Bank Account ಗೆ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಫಲಾನುಭವಿಗಳಿಗೆ ತಕ್ಷಣವೇ ಮಂಜೂರಾತಿ ಪತ್ರ ನೀಡಲಾಗುವುದಿಲ್ಲ. ಬ್ಯಾಕ್ ಎಂಡ್‌ನಲ್ಲಿ ನೋಂದಾವಣೆ ಅರ್ಜಿಗಳನ್ನು ಸರ್ಕಾರದ ಆದೇಶ ಸಂಖ್ಯೆ: ಮಮಇ 70 ಮಮಅ 2023 (ಭಾಗ-4), ದಿನಾಂಕ: 12-06-2023ರಲ್ಲಿ ನಿಗಧಿಪಡಿಸಲಾದ ಸಂಬಂಧಿಸಿದ ತಾಲ್ಲೂಕಿನ/ಯೋಜನೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಲಾಗಿನ್‌ಗೆ ಕಳುಹಿಸಿ ಪರಿಶೀಲನೆ ನಡೆಸುವುದು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಮ್ಮ ಲಾಗಿನ್‌ನಲ್ಲಿ ಸ್ವೀಕೃತವಾಗಿರುವ ನೋಂದಾವಣೆ ಅರ್ಜಿಗಳನ್ನು ಒಂದೊಂದಾಗಿ ಪರಿಶೀಲಿಸಿ, ಪ್ರತಿ ನೋಂದಾವಣೆ ಅರ್ಜಿಯನ್ನು ಈಗಾಗಲೇ ಪಡಿತರ ಚೀಟಿಯನ್ವಯ ವ್ಯಕ್ತವಾಗಿರುವ ಯಜಮಾನಿಯ ಹೆಸರು ಹಾಗೂ ಪಾಸ್ ಪುಸ್ತಕದಲ್ಲಿರುವ ಖಾತೆದಾರರ ಹೆಸರು ಹೊಂದಾಣಿಕೆಯಾಗುವುದನ್ನು ತಾಳೆ ನೋಡುವುದು. ಹಾಗೆ ವಿವರಗಳನ್ನು ತುಲನೆ ಮಾಡಿದ ನಂತರ ಹೊಂದಾಣಿಕೆಯಾದಲ್ಲಿ ಮಾತ್ರ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಪಡೆಯಲು ಶಿಫಾರಸ್ಸು ಮಾಡುವುದು. ಆನಂತರವೇ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ನೀಡುವುದು.
4. ಒಂದು ವೇಳೆ Non Aadhar Seeded Bank Accountಗೆ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಫಲಾನುಭವಿಗಳ ಅತಿ ಹೆಚ್ಚು ಇದ್ದು, ಹೆಚ್ಚಿನ ಸಂಖ್ಯೆಯ ನೋಂದಾವಣೆ ಅರ್ಜಿಗಳು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಲಾಗಿನ್‌ಗೆ ಕಳುಹಿಸಲ್ಪಟ್ಟಲ್ಲಿ, ತಾಲ್ಲೂಕು ಮಟ್ಟದ ಇತರೆ ಅಧಿಕಾರಿಗಳಿಗೂ ಅಂದರೆ, ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ, ತಹಶೀಲ್ದಾರ್‌ರವರಿಗೂ ಪ್ರತ್ಯೇಕ ಲಾಗಿನ್ ರಚಿಸಿ ಹೆಚ್ಚಿನ ನೋಂದಾವಣೆ ಅರ್ಜಿಗಳನ್ನು ಪರಿಶೀಲಿಸಿ ಮಂಜೂರಾತಿಗೆ ಶಿಫಾರಸ್ಸು ಮಾಡಲು ವ್ಯವಸ್ಥೆ ಮಾಡಲಾಗುವುದು.

- **ಗೃಹಲಕ್ಷ್ಮಿ ಯೋಜನೆಯ ಸಹಾಯವಾಣಿ – 1902:**

ಗೃಹಲಕ್ಷ್ಮಿ ಯೋಜನೆ ಕುರಿತು ಯಾವುದೇ ಪ್ರಶ್ನೆಗಳು ಅಥವಾ ಸಮಸ್ಯೆಗಳಿಗೆ ಉಚಿತ Toll Free ಸಹಾಯವಾಣಿ ಸಂಖ್ಯೆ:1902 ಕ್ಕೆ ಬೆಳಿಗ್ಗೆ 9-00 ರಿಂದ ಸಂಜೆ 6-00 ಗಂಟೆಯವರೆಗೆ ಕರೆ ಮಾಡಬಹುದು.

- **ಗೃಹಲಕ್ಷ್ಮಿ ಯೋಜನೆಯ ವರದಿ ತಯಾರಿಕೆ ಕುರಿತು**:

ಗೃಹಲಕ್ಷ್ಮಿ ಯೋಜನೆಯಡಿ ಯೋಜನೆಯ ಕುರಿತಂತೆ ಅರ್ಹ ಫಲಾನುಭವಿಗಳ ವಿವರ, ಅರ್ಜಿಗಳ ಸ್ಥಿತಿ-ಗತಿ, ಅರ್ಜಿ ತಿರಸ್ಕಾರ, ಕಾರಣಗಳು, ನೋಂದಾಯಿಸಿದ ವಿವರ, ಹಣ ಪಾವತಿ, DBT ಮೂಲಕ ಹಣ ಪಾವತಿಯಾಗದ ವಿವರಗಳು ಇತ್ಯಾದಿಗಳನ್ನೊಳಗೊಂಡ ಯೋಜನೆಯ ಸಂಪೂರ್ಣ ವರದಿಯನ್ನು ಎಂ.ಐ.ಎಸ್. (Management of Information System) ಮೂಲಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಪಡೆಯುವುದು. ನಿರ್ದೇಶನಾಲಯದ ಹಂತದಲ್ಲಿ ಜಿಲ್ಲೆಗಳಿಂದ ಎಂ.ಐ.ಎಸ್.ನಲ್ಲಿ ಸಲ್ಲಿಸಿದ ವರದಿಯನ್ನು ಪರಿಶೀಲಿಸಿಕೊಳ್ಳುವುದು.

- **<u>ಗೃಹಲಕ್ಷ್ಮಿ ಯೋಜನೆಯ ಕುಂದು ಕೊರತೆ ನಿವಾರಣೆ ಕುರಿತು</u>**

ಇಲಾಖೆಯ ಶಿಶು ಅಭಿವೃದ್ಧಿ ಯೋಜನೆಗಳಡಿ ಕರ್ತವ್ಯ ನಿರ್ವಹಿಸುತ್ತಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಆಯಾ ತಾಲ್ಲೂಕಿನಡಿ ಗೃಹಲಕ್ಷ್ಮಿ ಯೋಜನೆಯ ಕುರಿತಂತೆ ಸಾರ್ವಜನಿಕರಿಂದ ಬರುವಂತಹ ಕುಂದು ಕೊರತೆಗಳನ್ನು ಪರಿಶೀಲಿಸಿ ಪರಿಹಾರಗಳನ್ನು ಸೂಚಿಸುವುದು.

- **ಇಲಾಖೆಯ ಜವಾಬ್ದಾರಿಗಳು**:

1. ಮಾಹೆಯಾನ ಎಂ.ಐ.ಎಸ್. ವರದಿ update ಮಾಡಿಸುವುದು.
2. ಸಾರ್ವಜನಿಕರಿಂದ ಬರುವ ಕುಂದು-ಕೊರತೆಗಳ ಕುರಿತು ನಿಯಮಾನುಸಾರ ಕ್ರಮವಹಿಸುವುದು.
3. ಸೇವಾಸಿಂಧು ಪೋರ್ಟಲ್‌ಗೆ ಸಂಬಂಧಿಸಿದಂತೆ ಇ-ಆಡಳಿತ ಇಲಾಖೆಯ ಸಹಕಾರದೊಂದಿಗೆ ಕಾರ್ಯನಿರ್ವಹಿಸುವುದು.
4. ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ ಅಂದಾಜು ಆಯವ್ಯಯ, ಕ್ರಿಯಾ ಯೋಜನೆ, ಮಾಸಿಕ ಅನುಷ್ಠಾನ ಪ್ರಗತಿ ವಿವರ, ಅನುದಾನ ಬಿಡುಗಡೆ ಮತ್ತು ವೆಚ್ಚ ಭರಿಸುವಿಕೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮವಹಿಸುವುದು.
5. ಯೋಜನೆಯ ಅನುಷ್ಠಾನ ಕುರಿತು ಪರಿಶೀಲನೆ ಮತ್ತು ವರದಿ ಸಿದ್ಧಪಡಿಸುವುದು.
6. ಸಹಾಯವಾಣಿ ಸಂಖ್ಯೆ 1902 ಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಸಾರ್ವಜನಿಕರಿಂದ ಸ್ವೀಕೃತವಾದ ಪ್ರಶ್ನೆಗಳಿಗೆ ಮಾಹಿತಿ ಒದಗಿಸುವುದು.
7. ಮಾಹಿತಿ, ಶಿಕ್ಷಣ ಮತ್ತು ಸಂವಹನ ಕುರಿತ (IEC) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.


- **ಅಪೀಲು**

ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಆಯಾ ಜಿಲ್ಲೆಯ ಗೃಹಲಕ್ಷ್ಮಿ ಯೋಜನೆ ಕುರಿತಂತೆ ಅಪೀಲು ಪ್ರಾಧಿಕಾರಿಯಾಗಿರುತ್ತಾರೆ.


N.S. Khatavkar
17/07/2023

**(ನಿರ್ಮಲಾ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

# ಅನುಬಂಧ-1



PRE-SANCTIONED RC'S
Kutumba will share the eligible data with Seva Sindhu & the new application to fetch the RC information from Seva Sindhu
RC Number Entry
Caste details
1- SC
2- ST
3- OBC
4- Others
Specify the bank a/c to which the money to be deposited
1- Aadhar Linked A/c (To be frozen)
2- Other A/c (A/c no & IFSC Code)
Provision to enter mobile number is given
Duplication check & character validation (10 digits only)
Declaration
HOF & her husband are not IT payee/GST returns
E-KYC
OTP/Biometric/ authentication
Hash of Aadhaar in eKYC response matches Hash of Aadhaar of HoF in Ration Card
Matching
Not Matching
Sanction order will be downloaded & printed
After Sanction order is printed, RC number will be frozen for the application
ANNEXURE
BANK PASS BOOK FRONT PAGE COPY
End the application
Message prompt
Only HOF Aadhar can be considered for the scheme. Re apply with correct Aadhar number

# ಅನುಬಂಧ-2



PROCESS FOR OPEN PORTAL
Applicant does e-KYC
Provision to enter RC number is provided to the applicant
Kutumba will share the eligible data with Seva Sindhu & the application to fetch the RC information from Seva Sindhu
Verify through the DB provided
INVALID RC
End the application with a message prompt
You have entered an invalid RC number- Please try again with a valid RC number
VALID RC
Caste details
1- SC
2- ST
3- OBC
4- Others
Specify the bank a/c to which the money to be deposited
1- Aadhar Linked A/c (To be frozen)
2- Other A/c (A/c no & IFSC Code)
Display Family members(Grid Format)
Name & Gender of the members are shown
Option to Select Husband from the family list will be given
Are husband details available
NO
Drop down provided for selection
1- Unmarried
2- Separated
3- Deceased
4- Add husbands name
Option-4
Enter Husbands Name as per Aadhar
Convert to hash & store
YES
Option- 1,2,3
Declaration
Duplication check & character validation (10 digits only)
Enter Mobile Number
ANNEXURES
BANK PASS BOOK FRONT PAGE
Submit

# ಅನುಬಂಧ-3


Process for CV registration
Citizen volunteers registration Mobile app/SS
Registered volunteers will download the mobile application
Mobile application will show her the list of RCs along with the address
CV to visit the RC owner & capture the information
CV to follow the application entry process
PROCESS FOR CITIZEN ENROLLERS
RC Number Entry
Caste details
1- SC
2- ST
3- OBC
4- Others
Specify the bank a/c to which the money to be deposited
1- Aadhar Linked A/c (To be frozen)
2- Other A/c (A/c no & IFSC Code)
Provision to enter mobile number is given
Duplication check & character validation (10 digits only)
Declaration HOF & her husband are not IT payee/GST returns
E-KYC OTP/Biometric authentication
Hash of Aadhaar in eKYC response matches Hash of Aadhaar of HoF in Ration Card
Not Matching
Matching
End the application
Message prompt
Only HOF Aadhar can be considered for the scheme. Re apply with correct Aadhar number
Sanction order will be pushed to CV account
After Sanction order is printed, RC number will be frozen for the application
ANNEXURE
BANK PASS BOOK FRONT PAGE COPY
Process for printing Sanction Orders
Sanction order will be pushed to CV account
CV will visit her nearest G1/B1/K1, AJSK, BSK center & provides her user id
Operator downloads the list of RCs that are approved in the user id provided
List will be printed in duplicate
Operator then prints the sanction orders & hands it over to the CV
CV gives receipt in the printed list